

## ಇಂದಿರಾ ಕ್ಲಿನಿಕ್

ಬೆಂಗಳೂರಿನಲ್ಲಿ ‘ಇಂದಿರಾ ಕ್ಯಾಂಟೀನ್’ ಯೋಜನೆ ಜನಪ್ರಿಯಗೊಂಡ ಬೆನ್ನಲ್ಲೇ ‘ಇಂದಿರಾ ಕ್ಲಿನಿಕ್’ ಎಂಬ ನೂತನ ಯೋಜನೆ ಜಾರಿಗೊಳಿಸಲು ಮುಂದಾಗಿದೆ. ಬೆಂಗಳೂರು ನಗರದಲ್ಲಿ ಕೇಂದ್ರ ಪ್ರದೇಶದ ಜನನಿಬಿಡ ಸ್ಥಳಗಳಾದ ಕೆಂಪೇಗೌಡ ಬಸ್ ನಿಲ್ದಾಣ ಮತ್ತು ಯಶವಂತಪುರ ಬಸ್ ನಿಲ್ದಾಣಗಳಲ್ಲಿ, ಸಾರ್ವಜನಿಕರು, ಪ್ರಯಾಣಿಕರು, ಸಾರಿಗೆ ಸಿಬ್ಬಂದಿ, ಕಾಲುದಾರಿ ನಿವಾಸಿಗಳು ಮತ್ತು ನಿರ್ಗತಿಕರಿಗೆ ಪ್ರಾಥಮಿಕ ಹಂತದ ಮತ್ತು ತುರ್ತು ವೈದ್ಯಕೀಯ ಸಂರಕ್ಷಣಾ ಸೇವೆ ಒದಗಿಸಲು ಎರಡು ‘ಇಂದಿರಾ ಟ್ರಾನ್ಸಿಟ್ ಕ್ಲಿನಿಕ್’ ಪ್ರಾರಂಭಿಸಲಾಗಿದೆ. ಈ ಕ್ಲಿನಿಕ್‌ಗಳಲ್ಲಿ ಉಚಿತ ಪ್ರಯೋಗಶಾಲೆ ಪರೀಕ್ಷೆ, ಚಿಕಿತ್ಸೆ ಮತ್ತು ಔಷಧೋಪಚಾರ ನೀಡಲಾಗುತ್ತದೆ. ಇಂತಹದ್ದೊಂದು ವಿಶಿಷ್ಟ ಪ್ರಯೋಗ ದೇಶದಲ್ಲೇ ಪ್ರಥಮ. ಹಾದಿ–ಬೀದಿಗಳಲ್ಲಿ ಯಾರ ಆಸರೆ ಇಲ್ಲದೆ ಬೀದಿಪಾಲಾದವರಿಗೆ ಆರೋಗ್ಯ ಸೇವೆಯನ್ನು ನೀಡುವ ಆದರ್ಶಪ್ರಾಯ ಯೋಜನೆ ಇತರ ರಾಜ್ಯಗಳಿಗೂ ಮಾದರಿಯಾದೀತು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಬಳಸಲಾಗುತ್ತಿದೆ. ಬಡ ಮಧ್ಯಮ ವರ್ಗದ ರೋಗಿಗಳು ಸಾಲ– ಸೋಲ ಮಾಡಿ ಈ ಸೇವೆ ಪಡೆದುಕೊಳ್ಳಬೇಕಾದ ವ್ಯವಸ್ಥೆ ಈಗಲೂ ಇದೆ. ಈ ಕೊರತೆ ನೀಗಬೇಕು ಎಂಬ ಉದ್ದೇಶದಿಂದ ಸರ್ಕಾರ 14 ಜಿಲ್ಲಾ ಆಸ್ಪತ್ರೆಗಳಲ್ಲಿ ಸಿ.ಟಿ.ಸ್ಕ್ಯಾನ್ ಮತ್ತು 5 ಜಿಲ್ಲಾ ಆಸ್ಪತ್ರೆಗಳಲ್ಲಿ ಎಂ.ಆರ್.ಐ ಸ್ಕ್ಯಾನ್ ಉಪಕರಣಗಳನ್ನು ಅಳವಡಿಸಲು ಮುಂದಾಗಿದೆ. ಈಗಾಗಲೇ ಕೋಲಾರ ಮತ್ತು ತುಮಕೂರು ಜಿಲ್ಲಾ ಆಸ್ಪತ್ರೆಗಳಲ್ಲಿ ಸಿ.ಟಿ.ಸ್ಕ್ಯಾನ್ ಆರಂಭಿಸಲಾಗಿದೆ. ಮಾರ್ಚ್ ಒಳಗೆ ಉದ್ದೇಶಿತ ಜಿಲ್ಲಾ ಆಸ್ಪತ್ರೆಗಳಲ್ಲಿ ಈ ಉಪಕರಣಗಳನ್ನು ಅಳವಡಿಸಲಿದೆ.

### ರಕ್ತ ವಿದಳನ ಘಟಕ:

ಮಲೇರಿಯಾ, ಡೆಂಗಿ ಮತ್ತು ಚಿಕೂನ್ ಗುನ್ಯಾ ಜ್ವರ ರಾಜ್ಯವನ್ನು ತೀವ್ರವಾಗಿ ಕಾಡುತ್ತಿದೆ. ಡೆಂಗಿಗೆ ಸೂಕ್ತ ಸಂದರ್ಭದಲ್ಲಿ ಚಿಕಿತ್ಸೆ ಸಿಗದ ಕಾರಣ ಎಷ್ಟೋ ಜನ ಪ್ರಾಣವನ್ನೂ ಕಳೆದುಕೊಂಡಿದ್ದಾರೆ. ಈ ಜ್ವರದಿಂದ ಬಳಲುವವರ ರಕ್ತದಲ್ಲಿ ಪ್ಲೇಟ್‌ಲೆಟ್ ಕಡಿಮೆ ಆದಾಗ ತೊಂದರೆಗೆ ಸಿಲುಕುತ್ತಾರೆ. ಬಡ ರೋಗಿಗಳ ಜೀವ ಉಳಿಸಲು ಬಾಗಲಕೋಟೆ, ವಿಜಯಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಹಾವೇರಿ, ಕೊಡಗು, ಕೋಲಾರ, ತುಮಕೂರು ಮತ್ತು ಉತ್ತರ ಕನ್ನಡದ 10 ಜಿಲ್ಲಾ ಆಸ್ಪತ್ರೆಗಳಲ್ಲಿ ರಕ್ತ ವಿದಳನಾ ಘಟಕಗಳನ್ನು ಸ್ಥಾಪಿಸಲಾಗಿದೆ.

### ಆಸ್ಪತ್ರೆಗಳು ಮೇಲ್ದರ್ಜೆಗೆ

ಕಾಲಕ್ಕೆ ತಕ್ಕಂತೆ ಆರೋಗ್ಯ ಸೇವೆ ಮತ್ತು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಮುಕ್ತ ಮನಸ್ಸು ಹೊಂದಿರುವುದು ಮಾತ್ರವಲ್ಲದೆ, ಅದಕ್ಕೆ ಪೂರಕವಾಗಿ ಆಸ್ಪತ್ರೆಗಳನ್ನು ಉನ್ನತೀಕರಿಸುವ ಕಾರ್ಯಕ್ಕೂ ಕೈ ಹಾಕಿದೆ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ದೊಡ್ಡ ನಗರಗಳಿಗೆ ಮಾತ್ರ ಸೀಮಿತವಾಗಬಾರದು, ಎರಡನೇ ಮತ್ತು ಮೂರನೇ ಹಂತದ ನಗರ ಮತ್ತು ಪಟ್ಟಣಗಳಲ್ಲಿರುವ ಜನರಿಗೂ ಅದರ ಸೌಲಭ್ಯ ಸಿಗಬೇಕು. ಇದರಿಂದ ರೋಗಿಗಳನ್ನು ದೊಡ್ಡ ಪಟ್ಟಣಗಳಿಗೆ ಕರೆದುಕೊಂಡು ಬರುವುದು ತಪ್ಪುತ್ತದೆ ಎಂಬುದು ಸರ್ಕಾರದ ಉದ್ದೇಶ.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಖಾಸಗಿ ಸಹಭಾಗಿತ್ವದೊಂದಿಗೆ ಆರಂಭಿಸಲು ನಿರ್ಧರಿಸಿದೆ. ಆರಂಭದಲ್ಲಿ ಕೋಲಾರದ ಶ್ರೀನಿವಾಸಪುರ ಮತ್ತು ವಿಜಯಪುರಗಳಲ್ಲಿ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು. ನಂತರದ ಹಂತದಲ್ಲಿ ದಾವಣಗೆರೆ, ರಾಮನಗರ ಜಿಲ್ಲೆಯ ಕನಕಪುರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಸ್ಥಾಪಿಸಲು ಸರ್ಕಾರ ತೀರ್ಮಾನಿಸಿದೆ.

### ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ಅಭಯ

ಒಂದು ಸರ್ಕಾರ ಮಾನವೀಯವಾಗಿರಬೇಕು ಎಂಬುದಕ್ಕೆ ‘ಇಂದಿರಾ ಸುರಕ್ಷಾ’ ಎಂಬ ನೂತನ